ಬೇಡಿಕೆ ಸಂ: 53 –ಕ್ರಮಪಡಿಸಿದ ಮಾರುಕಟ್ಟೆಗಳು

ಶ್ರೀ ಎಚ್. ನಾಗಪ್ಪ (ಕ್ರಮಪಡಿಸಿದ ಮಾರುಕಟ್ಟೆ ಸಚಿವರು) : ಮಾನ್ಯ ಉಪಾಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1999ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಕ್ರಮ ಪಡಿಸಿದ ಮಾರುಕಟ್ಟೆಗಳಿಗಾಗಿ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ರಾಜಸ್ವ ಖಾತೆಯಲ್ಲಿ 26,37,04,000 ರೂ. ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು (ಮಂಡಿಸಲು) ಕೋರುತ್ತೇನೆ.

ಪ್ರಸ್ತಾವನ್ನು ಮಂಡಿಸಲಾಯಿತು

ಉಪಾಧ್ಯಕ್ಷರು : ಸೆಂಟ್ರಲ್ ಗ್ರಿಡ್‌ನಿಂದ ಪವರನ್ನು ಓವರ್ ಡ್ರಾ ಮಾಡಲಾಗುತ್ತಿದೆ ಎಂಬುದನ್ನು ಪತ್ರಿಕೆಯಲ್ಲಿ ಪ್ರಕಟಿಸಬಾರದೆಂದು ಪತ್ರಿಕಾಕರ್ತರಲ್ಲಿ ಕೋರುತ್ತೇನೆ. ಈಗ ಸದನವನ್ನು ಮುಂದೂಡುತ್ತಿದ್ದೇನೆ. ಸದನವು ಮತ್ತೆ : 20.4.98ರ ಸೋಮವಾರ ಬೆಳಿಗ್ಗೆ 11 ಗಂಟೆಗೆ ಸಭೆ ಸೇರಲಾಗುವುದು.

(ಸದನವು ಮಧ್ಯಾಹ್ನ 2.35ಕ್ಕೆ ಮುಕ್ತಾಯಗೊಂಡು ಮತ್ತೆ ದಿ:20.4.98ರ ಸೋಮವಾರ ಬೆಳಿಗ್ಗೆ 11 ಗಂಟೆಗೆ ಸೇರಲು ನಿಶ್ಚಯಿಸಿತು)

(+ ಈ ಚಿಹ್ನೆ ಮಾನ್ಯ ಸದಸ್ಯರ ಟಿಪ್ಪಣಿ ಅಥವಾ ಭಾಷಣವನ್ನು ಪರಿಷ್ಕರಿಸಿಲ್ಲ ಎಂದು ಸೂಚಿಸುತ್ತದೆ)